ಕರ್ನಾಟಕ ಸರ್ಕಾರ
ಮೀನುಗಾರಿಕೆ ನಿರ್ದೇಶನಾಲಯ

3ನೇ ಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ|| ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001
ದೂ : 080 - 2286 4681/4604 ಫ್ಯಾಕ್ಸ್ : 080 - 2286 4619 ಇಮೇಲ್ : dof-blr-ka@nic.in

**ಸಂಖ್ಯೆ: DOF-TECHOALL2/180/2021,E-632594.** **ದಿನಾಂಕ: 12/12/2021.**

# ಸುತ್ತೋಲೆ

**ವಿಷಯ:** ಮೀನುಗಾರಿಕೆ ಇಲಾಖಾ ವ್ಯಾಪ್ತಿಯ ಒಳನಾಡು ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು 2021-22ನೇ ಸಾಲಿನಿಂದ ವಿಲೇವಾರಿ ಮಾಡುವ ಕುರಿತು.

**ಉಲ್ಲೇಖ:** ಸರ್ಕಾರದ ಪತ್ರ ಸಂ:ಸಂಮೀ ಇ-138 ಮೀಇಇ 2021. ದಿನಾಂಕ:24/11/2021.

*************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಅಡಕಗೊಳಿಸಿರುವ ಪತ್ರಗಳಲ್ಲಿ ದಿನಾಂಕ:4/10/2021ರಂದು ಮಾನ್ಯ ಸರ್ಕಾರದ ಪಧ್ರಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ನಡೆಸಿದ ವೀಡಿಯೊ ಸಂವಾದದಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ರವರು ಭಾಗವಹಿಸಿ ರಾಜ್ಯದ ಮೀನು ಉತ್ಪಾದನೆಯನ್ನು ಗಣನೀಯವಾಗಿ ಹೆಚ್ಚಿಸಲು ಮೀನುಗಾರಿಕೆ ಇಲಾಖೆ ಉದ್ದೇಶಿಸಿದ್ದು, ಈ ನಿಟ್ಟಿನಲ್ಲಿ ಎಲ್ಲಾ ರೀತಿಯ ಜಲಸಂಪನ್ಮೂಲಗಳನ್ನು ಮೀನುಗಾರಿಕೆ ಅಳವಡಿಸಲು ಕ್ರಮ ವಹಿಸುತ್ತಿರುವುದಾಗಿ ತಿಳಿಸಿದ್ದು, ಅದರಂತೆ ಸಂಬಂಧಪಟ್ಟ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಹಾಗೂ ಮೀನು ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಪ್ರತಿ ತಾಲ್ಲೂಕು ಮತ್ತು ಜಲ್ಲಾ ಮಟ್ಟದ ಸಂಬಂಧಿಸಿದ ಅಧಿಕಾರಿಗಳಿಗೆ ಕಳುಹಿಸುವಂತೆ ತಿಳಿಸಿರುತ್ತಾರೆಂದು ನಮೂದಿಸಿರುತ್ತಾರೆ.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿನ ಎಲ್ಲಾ ಗ್ರಾಮ ಪಂಚಾಯತಿ ಕೆರೆಗಳ ಮೀನು ಪಾಶುವಾರು ಹಕ್ಕನ್ನು ವಿಲೇ ಮಾಡುವುದರ ಜೊತೆಗೆ, ಮೀನುಮರಿ ಬಿತ್ತನೆ, ಮೀನು ಉತ್ಪಾದನೆ ಮತ್ತು ಮೀನುಗಾರಿಕೆಗೆ ಸಂಬಂಧಿಸಿದ ಮಾಹಿತಿಗಳನ್ನು ನಿಗದಿತ ನಮೂನೆಗಳಲ್ಲಿ ಸಂಬಂಧಪಟ್ಟ ಮೀನುಗಾರಿಕೆ ಸಹಾಯಕ ನಿರ್ದೇಶಕರು ಮತ್ತು ಉಪನಿರ್ದೇಶಕರಿಗೆ ಕಳುಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಯಚೂರು, ರಾಮನಗರ,

ಯಾದಗಿರಿ ಮತ್ತು ಮೈಸೂರು ರವರುಗಳು ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಾಗೂ ಪಂಚಾಯಿತಿ ಅಧಿಕಾರಿಗಳಿಗೆ ಸೂಚಿಸಿರುತ್ತಾರೆ.

ಇನ್ನು ಮುಂದೆ ಗ್ರಾಮ ಪಂಚಾಯತಿ ಕೆರೆಗಳ ವಿಲೇವಾರಿ,ಮೀನುಮರಿ ಬಿತ್ತನೆ ಮತ್ತು ಮೀನು ಉತ್ಪಾದನೆ ಮಾಹಿತಿಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಂದ ಕಡ್ಡಾಯವಾಗಿ ಪಡೆದುಕೊಂಡು ಪ್ರತಿ ಮಾಹೆ ಸಲ್ಲಿಸಲು ಸಂಬಂಧಪಟ್ಟ ಎಲ್ಲಾ ತಾಲ್ಲೂಕು ಮಟ್ಟದ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ತಿಳಿಸಲಾಗಿದೆ. ತಪ್ಪಿದ್ದಲ್ಲಿ ನಿಯಮಾನುಸಾರ ಕ್ರಮ ವಹಿಸಲಾಗುವುದು.

ಅಡಕ: ಸರ್ಕಾರದ ಪತ್ರ ಮತ್ತು ಅಡಕಗಳು.

14/12/2021

ಮೀನುಗಾರಿಕೆ ನಿರ್ದೇಶಕರ ಪರವಾಗಿ

14/12/21

ಗೆ.

ಎಲ್ಲಾ ಮೀನುಗಾರಿಕೆ ಜಂಟಿ ನಿರ್ದೇಶಕರು.
ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ.
ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ.
ಪ್ರತಿಯನ್ನು: ಕೇಂದ್ರ ಕಛೇರಿಯ ಹಗುಪ(1) ಮತ್ತು (2)ಸಂಗ್ರಹ ಕಡತಕ್ಕೆ.

DOF-TECH0ALL2/180/2021-TECH-DIRECTORATE OF FISHERIES
3324834/2021/DIRECTORATE OF FISHERIES

# ಕರ್ನಾಟಕ ಸರ್ಕಾರ

ಸಂಖ್ಯೆ:ಪಸಂಮೀ ಇ-138 ಮೀಇಇ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 24-11-2021

ಇವರಿಂದ,
ಸರ್ಕಾರದ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ವಿಕಾಸಸೌಧ,
**ಬೆಂಗಳೂರು.**

"**ಅತೀ ಜರೂರು**"

ಇವರಿಗೆ,
ಮೀನುಗಾರಿಕೆ ನಿರ್ದೇಶಕರು
**ಬೆಂಗಳೂರು.**

ಮಾನ್ಯರೇ,

ವಿಷಯ:- ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಮತ್ತು ಮೀನುಮರಿ ಬಿತ್ತನೆಗೆ ಸಂಬಂಧಿಸಿದ ಅಗತ್ಯ ಮಾಹಿತಿಗಳನ್ನು ಒದಗಿಸುವ ಬಗ್ಗೆ.

ಉಲ್ಲೇಖ:- ಮುಖ್ಯ ಕಾರ್ಯನಿರ್ವಹಣಾಧಿಕಾರಿ, ರಾಯಚೂರು ಮತ್ತು ರಾಮನಗರ ಯಾದಗಿರಿ, ಮೈಸೂರು ಇವರ ಪತ್ರಗಳ ದಿನಾಂಕ: 08-10-2021 ಮತ್ತು 16-10-2021. 13.10.2021 (ರಾಮನಗರ)

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಅಗತ್ಯ ಕ್ರಮಕ್ಕಾಗಿ ತಮಗೆ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

Kamakshi U.A
(ಕಾಮಾಕ್ಷಿ ಯು.ಎ.) 29/11/21
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

24.11.2021.

ಕರ್ನಾಟಕ ಸರ್ಕಾರ

# ಜಿಲ್ಲಾ ಪಂಚಾಯತ್ ರಾಯಚೂರು

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ, ಅರಬ್ ಮೊಹಲ್ಲಾ, ರಾಯಚೂರು-584101.

ದೂರವಾಣಿ ಸಂ:08532-228448 ಇ-ಮೇಲ್ ಸಂ: ceo_zp_rch@nic.in

ಸಂಖ್ಯೆ: ಜಿಪರಾ/ಮೀಇ/ಗ್ರಾ.ಪಂ.ಕೆರೆ/01/2021-22 ದಿನಾಂಕ: 08/10/2021

## ಜ್ಞಾಪನಾ ಪತ್ರ

ವಿಷಯ: ರಾಯಚೂರು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿ ಕೆರೆಗಳ ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡಿ ಮೀನು ಉತ್ಪಾದನೆಯನ್ನು ಹೆಚ್ಚಿಸುವ ಕುರಿತು.

ಉಲ್ಲೇಖ: 1) ದಿನಾಂಕ:04/10/2021ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ವೀಡಿಯೋ ಸಂವಾದದಲ್ಲಿ ಚರ್ಚಿಸಿರುವಂತೆ

2) ಸರ್ಕಾರದ ಆದೇಶ ಸಂಖ್ಯೆ: ಪ.ಸಂ.ಮೀ 125 ಮೀಇಇ 2013, ದಿನಾಂಕ: 21/02/2014

3) ಮೀನುಗಾರಿಕೆ ಉಪ ನಿರ್ದೇಶಕರು, ರಾಯಚೂರು ರವರ ಟಿಪ್ಪಣಿ ಕಡತ ಸಂಖ್ಯೆ: ಹಗುವ/35/2021-22, ದಿನಾಂಕ: 07/08/2021

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:04/10/2021ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ನಡೆಸಿದ ವೀಡಿಯೋ ಸಂವಾದದಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನ ಮತ್ತು ಮೀನುಗಾರಿಕೆ ಇಲಾಖೆ ರವರು ಭಾಗವಹಿಸಿ ರಾಜ್ಯದ ಮೀನು ಉತ್ಪದನೆಯನ್ನು ಗಣನೀಯವಾಗಿ ಹೆಚ್ಚಿಸಲು ಮೀನುಗಾರಿಕೆ ಇಲಾಖೆಯು ಉದ್ದೇಶಿಸಿದ್ದು, ಈ ನಿಟ್ಟಿನಲ್ಲಿ ಎಲ್ಲಾ ರೀತಿಯ ಜಲಸಂಪನ್ಮೂಲಗಳನ್ನು ಮೀನುಗಾರಿಕೆಗೆ ಅಳವಡಿಸಲು ಕ್ರಮ ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಅದರಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಹಾಗೂ ಮೀನು ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಪ್ರತಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಸಂಬಂಧಿಸಿದ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಕಳುಹಿಸುವಂತೆ ತಿಳಿಸಿರುತ್ತಾರೆ. ಉಲ್ಲೇಖ(3) ರ ಕಡತದಲ್ಲಿ ಮೀನುಗಾರಿಕೆ ಉಪ ನಿರ್ದೇಶಕರು, ರಾಯಚೂರು ಇವರು ಸದರಿ ವಿಷಯದ ಕುರಿತು ವಿನಂತಿಸುತ್ತಾ ಉಲ್ಲೇಖ(2) ರ ಆದೇಶದ ಕಂಡಿಕೆ-14 ರಲ್ಲಿ ನೀಡಿರುವ ಮಾರ್ಗಸೂಚಿಗಳ ಪ್ರಕಾರ ಗ್ರಾಮ ಪಂಚಾಯತ್ ವ್ಯಾಪ್ತಿಯ ಕೆರೆಗಳನ್ನು ವಿಲೇವಾರಿ ಮಾಡಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡುವಂತೆ ಹಾಗೂ ಮೀನುಗಾರಿಕೆ ಇಲಾಖೆಯ ಸಹಯೋಗದೊಂದಿಗೆ ರಾಯಚೂರು ಜಿಲ್ಲೆಯಲ್ಲಿ ಮೀನು ಉತ್ಪಾದನ ಹೆಚ್ಚಿಸಲು ಸಹಕಾರ ನೀಡುವಂತೆ ಸಂಬಂಧಪಟ್ಟವರಿಗೆ ಸೂಚನ ನೀಡಲು ಕೋರಿರುತ್ತಾರೆ.

ಆದ್ದರಿಂದ ಜಿಲ್ಲೆಯ 07 ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಕೆರೆಗಳ ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡುವುದರ ಜೊತೆಗೆ, ಮೀನುಮರಿ ಬಿತ್ತನೆ , ಮೀನು ಉತ್ಪಾದನೆ ಮತ್ತು ಮೀನುಗಾರಿಕೆಗೆ ಸಂಬಂಧಿಸಿದ ಮಾಹಿತಿಗಳನ್ನು ಈ ಪತ್ರಕ್ಕೆ ಲಗತ್ತಿಸಿದ ನಮೂನೆಯಲ್ಲಿ ಸಂಬಂಧಪಟ್ಟ ಮೀನುಗಾರಿಕೆ ಸಹಾಯಕ ನಿರ್ದೇಶಕರು ಮತ್ತು ಉಪ ನಿರ್ದೇಶಕರಿಗೆ ಕಳುಹಿಸುವಂತೆ ತಿಳಿಸಲಾಗಿದೆ. ಮೀನುಗಾರಿಕೆ ವಿಷಯಗಳಿಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿಯನ್ನು ಪಡೆಯಲು 24x7 ಮೀನುಗಾರಿಕೆ ಸಹಾಯವಾಣಿ ಸಂಖ್ಯೆ:8277200300 ಗೆ ಕರೆ ಮಾಡಿ ಅಗತ್ಯ ಮಾಹಿತಿ ಪಡೆದುಕೊಳ್ಳುವಂತೆ ತಿಳುವಳಿಕೆ ನೀಡಲು ತಿಳಿಸಲಾಗಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತ್, ರಾಯಚೂರು

ಗೆ,

1) ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯತ್
2) ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು

1) ಪ್ರತಿಯನ್ನು ಗೌರವಗಳೊಂದಿಗೆ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ
2) ಪ್ರತಿಯನ್ನು ಗೌರವಗಳೊಂದಿಗೆ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ
3) ಪ್ರತಿಯನ್ನು ಗೌರವಗಳೊಂದಿಗೆ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ
4) ಮೀನುಗಾರಿಕೆ ಉಪ ನಿರ್ದೇಶಕರು, ರಾಯಚೂರು ಇವರಿಗೆ ಅಗತ್ಯ ಕ್ರಮಕ್ಕಾಗಿ
5) ಜಿಲ್ಲೆ ಎಲ್ಲಾ ಮೀನುಗಾರಿಕೆ ಸಹಾಯಕ ನಿರ್ದೇಶಕರಿಗೆ ಅಗತ್ಯ ಕ್ರಮಕ್ಕಾಗಿ

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ
ಜಿಲ್ಲಾ ಪಂಚಾಯತ್, ರಾಯಚೂರು

E-3247317
11/11/20

ಕರ್ನಾಟಕ ಸರ್ಕಾರ

**ರಾಮನಗರ ಜಿಲ್ಲಾ ಪಂಚಾಯತ್**

**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ, ಪಂಚಾಯತ್ ಭವನ, ಬಿ.ಎಂ.ರಸ್ತೆ, ರಾಮನಗರ-562159.**

ಸಂ:ರಾಜಿಪಂ/ಸಿ3/ಸಿಆರ್-37/2021-22/3940 ದಿನಾಂಕ:13.10.2021.

ಗೆ,

1) ಕಾರ್ಯನಿರ್ವಾಹಕ ಅಧಿಕಾರಿ,
ತಾಲ್ಲೂಕು ಪಂಚಾಯಿತಿ,
ಚನ್ನಪಟ್ಟಣ, ಕನಕಪುರ,
ಮಾಗಡಿ ಮತ್ತು ರಾಮನಗರ.

1939
15/11/21

2) ಎಲ್ಲಾ 126 ಗ್ರಾಮ ಪಂಚಾಯಿತಿಗಳ
ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

**ಮಾನ್ಯರೆ,**

**ವಿಷಯ**:-ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಹಾಗೂ ಮೀನು ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಸಲ್ಲಿಸುವ ಬಗ್ಗೆ.

****0****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:04.10.2021 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯು ಉದ್ದೇಶಿಸಿದ್ದು, ಈ ನಿಟ್ಟಿನಲ್ಲಿ ಎಲ್ಲಾ ರೀತಿಯ ಜಲ ಸಂಪನ್ಮೂಲಗಳನ್ನು ಮೀನುಗಾರಿಕೆಗೆ ಅಳವಡಿಸಲು ಕ್ರಮ ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಆದುದರಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಮತ್ತು ಮೀನುಮರಿ ಬಿತ್ತನೆ, ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಯನ್ನು ಕ್ರೋಢೀಕರಿಸಲು ತಿಳಿಸಿರುತ್ತಾರೆ.

ಈ ಸಂಬಂಧ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಮತ್ತು ಮೀನುಮರಿ ಬಿತ್ತನೆ, ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಭರ್ತಿ ಮಾಡಿ ಈ ಕಛೇರಿಗೆ ಕೂಡಲೇ ಸಲ್ಲಿಸುವಂತೆ ಸೂಚಿಸಿದೆ ಹಾಗೂ ಮೀನುಗಾರಿಕೆಗೆ ಸಂಬಂಧಿಸಿದ ಅಗತ್ಯ ಮಾಹಿತಿಯನ್ನು ಮೀನುಗಾರಿಕೆ ಸಹಾಯವಾಣಿ:-8277200300ಗೆ ಕರೆ ಮಾಡಿ ಪಡೆದುಕೊಳ್ಳುವಂತೆ ಮೀನುಗಾರರಿಗೆ/ಮೀನು ಕೃಷಿಕರಿಗೆ ಸೂಕ್ತ ತಿಳುವಳಿಕೆ ನೀಡಲು ತಿಳಿಸಿದೆ.

11/11/2021
DS (F)

ತಮ್ಮ ವಿಶ್ವಾಸಿ,

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ರಾಮನಗರ ಜಿಲ್ಲಾ ಪಂಚಾಯತ್.

12/11/21

**ಪ್ರತಿಯನ್ನು**:-

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3) ಜಿಲ್ಲೆಯ ಎಲ್ಲಾ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರಿಗೆ ಮಾಹಿತಿಗಾಗಿ.
4) ಕಛೇರಿ ಪ್ರತಿ.

15.11.21
A2

ಶಿಲ್ಪಾ ಶರ್ಮಾ ಭಾಆಸೇ.,
ಮುಖ್ಯ ಕಾರ್ಯನಿರ್ವಾಹಣಾಧಿಕಾರಿ
ಜಿಲ್ಲಾ ಪಂಚಾಯತ, ಯಾದಗಿರಿ

ಜಿಲ್ಲಾಡಳಿತ ಭವನ,
ನೆಲಮಹಡಿ, 'ಸಿ' ಬ್ಲಾಕ್, ಕೊಠಡಿ ಸಂಖ್ಯೆ ಸಿ-12,
ಚಿತ್ತಾಪೂರ ರಸ್ತೆ, ಯಾದಗಿರಿ - 585 202.
ದೂ : 08473 - 253750, ಫ್ಯಾಕ್ಸ್ : 253756
ಇ-ಮೇಲ್ : ceozpyadgir-ka@nic.in

ಸಂಖ್ಯೆ:ಮುಕಾನಿ/ಹಗುಪ/12/2021-22/397

ದಿನಾಂಕ: 08-10-2021

ಗೆ,

1. ಜಿಲ್ಲೆಯ ಎಲ್ಲಾ ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು.

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತ ವ್ಯಾಪ್ತಿಯುಲ್ಲಿರುವ ಕೆರೆಗಳ ಮೀನುಪಾಶುವಾರು ಹಕ್ಕಿನ ವಿಲೇವಾರಿ ಮತ್ತು ಮೀನುಮರಿ ಬಿತ್ತನೆಗೆ ಸಂಬಂಧಿಸಿದ ಅಗತ್ಯ ಮಾಹಿತಿಗಳನ್ನು ಒದಗಿಸುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 04-10-2021 ರಂದು ಮಾನ್ಯ ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರೊಂದಿಗೆ ನಡೆಸಿದ ವೀಡಿಯೋ ಸಂವಾದದಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ರವರು ಸಹ ಭಾಗವಹಿಸಿ ರಾಜ್ಯದ ಮೀನು ಉತ್ಪಾದನೆಯನ್ನು ಗಣನೀಯವಾಗಿ ಹೆಚ್ಚಿಸಲು ಮೀನುಗಾರಿಕೆ ಇಲಾಖೆಯ ಉದ್ದೇಶಿಸಿದ್ದು, ಈ ನಿಟ್ಟಿನಲ್ಲಿ ಎಲ್ಲಾ ರಿತೀಯ ಜಲಸಂಪನ್ಮೂಲಗಳನ್ನು ಮೀನುಗಾರಿಕೆಗೆ ಅಳವಡಿಸಲು ಕ್ರಮ ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಅದರಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನುಪಾಶುವಾರು ಹಕ್ಕಿನ ವಿಲೇವಾರಿ ಹಾಗೂ ಮೀನು ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಪ್ರತಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಕಳುಹಿಸುವಂತೆ ತಿಳಿಸಿರುತ್ತಾರೆ.

ಆದುದರಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿಯುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಮತ್ತು ಮೀನುಮರಿ ಬಿತ್ತನೆ, ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು, ಹಾಗೂ ಮೀನುಗಾರರಿಗೆ ಸಂಬಂಧಿಸಿದ ಮಾಹಿತಿಗಳನ್ನು, ಹಾಗೂ ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಸಂಬಂಧಿಸಿದ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ ಮತ್ತು ಜಿಲ್ಲಾ ಮೀನುಗಾರಿಕೆ ಉಪ ನಿರ್ದೇಶಕರ ಕಛೇರಿಗೆ ಕಳುಹಿಸುವಂತೆ ತಿಳಿಸಿದೆ.

ಅಲ್ಲದೆ ಮೀನುಗಾರಿಕೆ ಸಹಾಯವಾಣಿ ಸಂಖ್ಯೆ: 8277200300 ಗೆ ಕರೆ ಮಾಡಿ ಮೀನುಗಾರಿಕೆಗೆ ಸಂಬಂಧಿಸಿದ ಅಗತ್ಯ ಮಾಹಿತಿ ಪಡೆದುಕೊಳ್ಳುವಂತೆ ಮೀನುಗಾರರಿಗೆ/ಮೀನುಕೃಷಿಕರಿಗೆ ಸೂಕ್ತ ತಿಳುವಳಿಕೆ ನೀಡುವಂತೆಯೂ ತಿಳಿಸಿದೆ.

ತಮ್ಮ ವಿಶ್ವಾಸಿ,

08-10-21

ಮುಖ್ಯ ಕಾರ್ಯನಿರ್ವಾಹಣಾಧಿಕಾರಿ
ಜಿಲ್ಲಾ ಪಂಚಾಯತ ಯಾದಗಿರಿ

ಪ್ರತಿಗಳು:-

1) ಗೌರವಗಳೊಂದಿಗೆ ಪ್ರತಿಯನ್ನು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಪ್ರತಿಯನ್ನು ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3) ಜಿಲ್ಲೆಯ ಎಲ್ಲಾ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರಿಗೆ ಮಾಹಿತಿಗಾಗಿ ಮತ್ತು ಅಗತ್ಯಕ್ರಮಕ್ಕಾಗಿ ಕಳುಹಿಸಿದೆ.

E-3247274
11/11/21

6/6
434.

1938
15/11/21

ಟೆಲಿಫ್ಯಾಕ್ಸ್ :0821- 2483533 ಇ-ಮೇಲ್: sadf.mysore@gmail.com

ಜಿಲ್ಲಾ ಪಂಚಾಯತ್ ಕಾರ್ಯಲಯ ಮೈಸೂರು

---

ಸಂಖ್ಯೆ: ಎಎಲ್ಎಲ್/19/2021-22 ದಿನಾಂಕ: 16/10/2021.

ಗೆ,

1.ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯಾನಿರ್ವಾಹಕ ಅಧಿಕಾರಿಗಳು

2.ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು

ಮಾನ್ಯರೇ,

ವಿಷಯ: ದಿನಾಂಕ: 04/10/2021 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಯವರು ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯ ವರೊಂದಿಗೆ ನಡೆಸಿರುವ ವೀಡಿಯೋ ಸಂವಾದದಲ್ಲಿ ಚರ್ಚಿಸಿರುವಂತೆ ಕೆರೆಗಳ ವಿಲೇವಾರಿಗೆ ಸಂಬಂಧಿಸಿದ ಮಾಹಿತಿಗಳನ್ನು ಸಲ್ಲಿಸುವ ಬಗ್ಗೆ.

** *** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 04/10/2021 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಇಲಾಖೆ ರವರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರೊಂದಿಗೆ ನಡೆಸಿದ ವೀಡಿಯೋ ಸಂವಾದದಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ರವರು ಸಹ ಭಾಗವಹಿಸಿ, ರಾಜ್ಯದ ಮೀನು ಉತ್ಪಾದನೆಯನ್ನು ಗಣನೀಯವಾಗಿ ಹೆಚ್ಚಿಸಲು ಮೀನುಗಾರಿಕೆ ಇಲಾಖೆಯು ಉದ್ದೇಶಿಸಿದ್ದು, ಈ ನಿಟ್ಟಿನಲ್ಲಿ ಎಲ್ಲಾ ರೀತಿಯ ಜಲಸಂಪನ್ಮೂಲಗಳನ್ನು ಮೀನುಗಾರಿಕೆಗೆ ಅಳವಡಿಸಲು ಕ್ರಮವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಅದರಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಹಾಗೂ ಮೀನು ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಪ್ರತಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಕಳುಹಿಸುವಂತ ತಿಳಿಸಿರುತ್ತಾರೆ.

ಆದುದರಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಮತ್ತು ಮೀನುಮರಿ ಬಿತ್ತನೆ, ಉತ್ಪಾದನೆಗೆ ಸಂಬಂಧಿಸಿದ ಮಾಹಿತಿಗಳನ್ನು ಹಾಗೂ ಮೀನುಗಾರರಿಗೆ ಸಂಬಂಧಿಸಿದ ಮಾಹಿತಿಗಳನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಸಂಬಂಧಿಸಿದ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿ ಮತ್ತು ಜಿಲ್ಲಾ ಮೀನುಗಾರಿಕೆ ಉಪ ನಿರ್ದೇಶಕರ ಕಛೇರಿಗೆ ಕಳುಹಿಸುವಂತೆ ತಿಳಿಸಿದೆ.

ಅಲ್ಲದೇ ಮೀನುಗಾರಿಕೆ ಸಹಾಯವಾಣಿ ಸಂಖ್ಯೆ: 8277200300ಗೆ ಕರೆ ಮಾಡಿ ಮೀನುಗಾರಿಕೆಗೆ ಸಂಬಂಧಿಸಿದಂತೆ ಅಗತ್ಯ ಮಾಹಿತಿ ಪಡೆದುಕೊಳ್ಳುವಂತೆ ಮೀನುಗಾರರಿಗೆ/ಮೀನು ಕೃಷಿಕರಿಗೆ ಸೂಕ್ತ ತಿಳುವಳಿಕೆ ನೀಡುವಂತೆಯೂ ತಿಳಿಸಿದೆ.

11/11/2021
US(F)

ತಮ್ಮ ವಿಶ್ವಾಸಿ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತ್ ಮೈಸೂರು

ಪ್ರತಿಯನ್ನು ಗೌರವಗಳೊಂದಿಗೆ ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಬಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

ಪ್ರತಿಯನ್ನು ಗೌರವಗಳೊಂದಿಗೆ ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

ಪ್ರತಿಯನ್ನು ಗೌರವಗಳೊಂದಿಗೆ ಮಾನ್ಯ ನಿರ್ದೇಶಕರು ಮೀನುಗಾರಿಕೆ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

12/11/21

15/11/21
AD